**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003.**

ದಿನಾಂಕ:16.05.2024

ಸಂಖ್ಯೆ: ಎ1/ಎಸ್.ಎಸ್.ಎಲ್.ಸಿ/ಪ-2/04/2024-25

**::ಸುತ್ತೋಲೆ::**

ವಿಷಯ:- 2024ರ ಎಸ್ ಎಸ್ ಎಲ್ ಸಿ ಪರೀಕ್ಷೆ-2ಕ್ಕೆ ಪುನರಾವರ್ತಿತ ಮತ್ತು **ಫಲಿತಾಂಶ ಉತ್ತಮಪಡಿಸಿಕೊಳ್ಳುವ** ವಿದ್ಯಾರ್ಥಿಗಳ ನೋಂದಣಿ ದಿನಾಂಕ ವಿಸ್ತರಣೆ ಕುರಿತು.

ಉಲ್ಲೇಖ: 1. ಈ ಕಛೇರಿ ಪರಿಷ್ಕೃತ ಮಾರ್ಗಸೂಚಿ ಎ1/ಎಸ್.ಎಸ್.ಎಲ್.ಸಿ/ಪ-2/04/2024-25 ದಿನಾಂಕ:10.05.2024

* * * * *

2024 ರ ಎಸ್ ಎಸ್ ಎಲ್ ಸಿ ಪರೀಕ್ಷೆ-1ಕ್ಕೆ ನೋಂದಾಯಿಸಿಕೊಂಡು ಪರೀಕ್ಷೆಗೆ ಗೈರು ಹಾಜರಾದ / ಪೂರ್ಣಗೊಳಿಸಲಾಗಿಲ್ಲದ [Not Completed] / ಹಿಂದಿನ ಸಾಲಿನಲ್ಲಿ ಅನುತ್ತೀರ್ಣರಾದ ಹಾಗೂ **ಫಲಿತಾಂಶ ಉತ್ತಮಪಡಿಸಿಕೊಳ್ಳುವ** ಅಭ್ಯರ್ಥಿಗಳಿಗೆ 2024ರ ಜೂನ್ ಮಾಹೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆ-2ನ್ನು ನಡೆಸುವ ಸಂಬಂಧ ಅರ್ಹ ಪುನರಾವರ್ತಿತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಉಲ್ಲೇಖ-1 ರಂತೆ ಅಹ್ವಾನಿಸಲಾಗಿರುತ್ತದೆ.

ಸದರಿ ಉಲ್ಲೇಖಿತ ಮಾರ್ಗಸೂಚಿಯಲ್ಲಿ ಪರೀಕ್ಷಾ ಶುಲ್ಕ ಪಾವತಿಗಾಗಿ ನಿಗಧಿಪಡಿಸಿರುವ ದಿನಾಂಕಗಳನ್ನು ಈ ಕೆಳಕಂಡಂತೆ ವಿಸ್ತರಿಸಿದೆ.

**ಆನ್‌ಲೈನ್‌ನಲ್ಲಿ ಪರೀಕ್ಷಾ ಅರ್ಜಿಯನ್ನು ನೋಂದಾಯಿಸಲು ಹಾಗೂ NEFT ಚಲನ್ ಮೂಲಕ ಬ್ಯಾಂಕ್‌ಗೆ ಪರೀಕ್ಷಾ ಶುಲ್ಕ ಪಾವತಿಸಲು ನಿಗಧಿಪಡಿಸಿರುವ ದಿನಾಂಕಗಳು:**

| ಕ್ರ ಸಂ | ವಿವರ | ನಿಗದಿಪಡಿಸಿದ್ದ ದಿನಾಂಕ | ವಿಸ್ತರಿಸಿರುವ ದಿನಾಂಕ |
|---|---|---|---|
| 1 | ಮಂಡಳಿ ಜಾಲತಾಣದ ಶಾಲಾ ಲಾಗಿನ್ ಮೂಲಕ ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು ನಿಗದಿಪಡಿಸಿದ <u>ಅಂತಿಮ</u> ದಿನಾಂಕ: | 16.05.2024 | 19.05.2024 (ಮಧ್ಯರಾತ್ರಿ 12 ಗಂಟೆಯ ವರೆಗೆ) |
| 2 | ಮಂಡಳಿ ಜಾಲತಾಣದ ಶಾಲಾ ಲಾಗಿನ್ ಮೂಲಕ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ಚಲನ್ ಮುದ್ರಿಸಿಕೊಳ್ಳಲು ನಿಗದಿಪಡಿಸಿದ ದಿನಾಂಕ: | 18.05.2024 | 21.05.2024 |
| 3 | ಕ್ರಮ ಸಂಖ್ಯೆ-3ರಂತೆ ಚಲನ್ ಮುದ್ರಿಸಿಕೊಂಡು ಬ್ಯಾಂಕ್‌ಗೆ ಜಮೆ ಮಾಡಲು ನಿಗದಿಪಡಿಸಿದ ದಿನಾಂಕ | 20.05.2024 | 23.05.2024 |
| 4 | 2002 ಮತ್ತು ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳ (NSR & NSPR) ಪರೀಕ್ಷಾ ಶುಲ್ಕವನ್ನು ಹಳೆಯ ಪದ್ಧತಿಯಂತೆ ಮಂಡಳಿಯ ನೆಫ್ಟ್ ಚಲನ್ ಮೂಲಕ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಪಾವತಿಸಲು ನಿಗದಿಪಡಿಸಿದ <u>ಅಂತಿಮ</u> ದಿನಾಂಕ | 20.05.2024 | 23.05.2024 |

| | | | |
|---|---|---|---|
| 5 | ಕೆಳಕಂಡ ದಾಖಲೆಗಳನ್ನು ಮಂಡಳಿಗೆ ಸಲ್ಲಿಸಲು ನಿಗಧಿಪಡಿಸಿದ <u>ಅಂತಿಮ</u> ದಿನಾಂಕ<br>• ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನೊಳಗೊಂಡಂತೆ ಶಾಲಾ ಲಾಗಿನ್‌ನಲ್ಲಿ ಸೃಜಿಸಲಾಗುವ ಚಲನ್ ಬಳಸಿಕೊಂಡು ಶುಲ್ಕ ಪಾವತಿಸಿದ ಮೂಲ ಚಲನ್<br>• 2002 ಮತ್ತು ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳ (NSR & NSPR) ಎಂಎಸ್ಎ ಮತ್ತು ಹಿಂದಿನ ಪದ್ಧತಿಯಂತೆ ಮಂಡಳಿ ನೆಫ್ಟ್ ಚಲನ್ ಮೂಲಕ ಶುಲ್ಕ ಪಾವತಿಸಿದ ಮೂಲ ಚಲನ್<br>• ನಾಮಿನಲ್‌ರೋಲ್ ಮತ್ತು ಸಂಬಂಧಿಸಿದ ಇತರೆ ದಾಖಲೆಗಳು. | 24.05.2024 | 27.05.2024 |

ಮೇಲೆ ವಿವರಿಸಿರುವಂತೆ ವಿಸ್ತರಿಸಿರುವ ದಿನಾಂಕದವರೆಗೆ ವಿದ್ಯಾರ್ಥಿಗಳ ನೋಂದಣಿ ಮಾಡತಕ್ಕದು. ಈ ಕುರಿತು ತಮ್ಮ ವ್ಯಾಪ್ತಿಗೆ ಬರುವ ಶಾಲಾ ಮುಖ್ಯೋಪಾಧ್ಯಾಯರು ಮುಖಾಂತರ ವಿದ್ಯಾರ್ಥಿಗಳ/ ಪೋಷಕರ ಗಮನಕ್ಕೆ ತಂದು ಇದರ ಸದುಪಯೋಗವನ್ನು ಪಡೆದುಕೊಳ್ಳಲು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು/ ಕ್ಷೇತ್ರ ಶಿಕ್ಷಣಾಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಈ ಮೂಲಕ ತಿಳಿಸಿದೆ. ಮತ್ತೆ ದಿನಾಂಕವನ್ನು ವಿಸ್ತರಿಸುವುದಿಲ್ಲ ಎಂದು ತಿಳಿಯ ಪಡಿಸಿದೆ.

16/5/2024

(ಹೆಚ್.ಎನ್.ಗೋಪಾಲಕೃಷ್ಣ)
ನಿರ್ದೇಶಕರು (ಪರೀಕ್ಷೆಗಳು)

<u>ಪ್ರತಿಯನ್ನು ಅಗತ್ಯ ಕ್ರಮಕ್ಕಾಗಿ:</u>

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ)ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಜಿಲ್ಲಾ ನೋಡಲ್ ಅಧಿಕಾರಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮುಂದಿನ ಸೂಕ್ತ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ಪ್ರೌಢ ಶಾಲಾ ಮುಖ್ಯಶಿಕ್ಷಕರುಗಳಿಗೆ ಅಗತ್ಯ ಕ್ರಮಕ್ಕಾಗಿ
5. ಶಾಖಾಧಿಕಾರಿಗಳು, ಬಿ, ಸಿ & ಲೆಕ್ಕಪತ್ರ ಶಾಖೆಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
6. ಶಾಖಾಧಿಕಾರಿಗಳು ಗಣಕ ಶಾಖೆ ಇವರು ಈ ಮಾರ್ಗಸೂಚಿಯನ್ನು ಮಂಡಳಿಯ ಜಾಲತಾಣ & ಶಾಲಾ ಲಾಗಿನ್‌ನಲ್ಲಿ ಪ್ರಕಟಿಸುವುದು.
7. ನಿರ್ದೇಶಕರು / ಕಾರ್ಯದರ್ಶಿಗಳ ಆಪ್ತ ಶಾಖೆಯ ಮಾಹಿತಿಗಾಗಿ,
8. ಮಂಡಳಿಯ ಎಲ್ಲಾ ಪರಿಶೀಲನಾ ಶಾಖೆಯ ಶಾಖಾಧಿಕಾರಿಗಳು ಮತ್ತು ಅಧೀಕ್ಷಕರುಗಳಿಗೆ ಅಗತ್ಯ ಕ್ರಮಕ್ಕಾಗಿ.

<u>ಪ್ರತಿಯನ್ನು:-</u>

1. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಗೌರವಗಳೊಂದಿಗೆ ಸಲ್ಲಿಸಿದೆ.
2. ಮಾನ್ಯ ಅಧ್ಯಕ್ಷರ ಆಪ್ತ ಶಾಖೆಗೆ.
3. ಕಛೇರಿ ಪ್ರತಿ.